ಆಸ್ಪತ್ರೆಯ ಆವರಣದಲ್ಲಿ ಧರ್ಮಶಾಲಾ ನಿರ್ಮಾಣ

4678 - ಶ್ರೀ ರಾಮಲಿಂಗಾರೆಡ್ಡಿ (ಜಯನಗರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಎಸ್.ಡಿ.ಎಸ್. ಕ್ಷಯ ಮತ್ತು ರಾಜೀವ್‌ಗಾಂಧಿ ಎದೆರೋಗಗಳ ಸಂಸ್ಥೆಯಲ್ಲಿ ಇರುವ ಹಾಸಿಗೆಗಳ ಸಂಖ್ಯೆ ಎಷ್ಟು?

ಆ) ರೋಗಿಗಳನ್ನು ನೋಡಿಕೊಳ್ಳಲು ಬರತಕ್ಕ ಸಂಬಂಧಿಗಳಿಗೆ ಈ ಆಸ್ಪತ್ರೆಗಳಲ್ಲಿ ಧರ್ಮ ಶಾಲಾ ವ್ಯವಸ್ಥೆ ಮಾಡಲಾಗಿದೆಯೇ?

ಇ) ಹಾಗಿದ್ದಲ್ಲಿ ಖಾಲಿ ಇರತಕ್ಕ ಜಾಗದಲ್ಲಿ ಧರ್ಮಶಾಲೆಯನ್ನು ನಿರ್ಮಿಸಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ?

ಡಾ|| ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) 470

ಆ) ಇಲ್ಲ.

ಇ) ಪ್ರಸ್ತುತ ಇಂತಹ ಯಾವುದೇ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ.

ಬೆಂಗಳೂರಿನ ಎಸ್.ಡಿ.ಎಸ್ ಕ್ಷಯ ಮತ್ತು ರಾಜೀವ್ ಗಾಂಧಿ ಎದೆ ರೋಗಗಳ ಸಂಸ್ಥೆಯನ್ನು ಸ್ವಾಯುತ್ತ ಸಂಸ್ಥೆಯನ್ನಾಗಿ ಪರಿವರ್ತಿಸುವುದು.

4679 - ಶ್ರೀ ರಾಮಲಿಂಗಾರೆಡ್ಡಿ (ಜಯನಗರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರಿನ ಎಸ್.ಡಿ.ಎಸ್ ಕ್ಷಯ ಮತ್ತು ರಾಜೀವ್ ಗಾಂಧಿ ಎದೆರೋಗಗಳ ಸಂಸ್ಥೆಯನ್ನು ಸ್ವಾಯತ್ತ ಸಂಸ್ಥೆಯನ್ನಾಗಿ ಪರಿವರ್ತಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆಯೇ?

ಆ) ಹಾಗಿದ್ದಲ್ಲಿ, ಈ ಬಗ್ಗೆ ಎಂದು ನಿರ್ಧಾರ ಕೈಗೊಳ್ಳಲಾಗುವುದು?

ಡಾ|| ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಪ್ರಸ್ತುತ ಇಂತಹ ಪ್ರಸ್ತಾವನೆ ಇರುವುದಿಲ್ಲ.

ಆ) ಪ್ರಶ್ನೆ 'ಅ' ಗೆ ನೀಡಿದ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.